# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರಾಮ ಪಂಚಾಯಿತಿ ಚುನಾವಣೆ-2020 ಮತದಾನ ಮಾಡುವ ಕುರಿತು ಮತ್ತು ಸೂಕ್ತ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ ರಾಜ್ಯಾದ್ಯಂತ ಮತದಾರರರಲ್ಲಿ ಜಾಗೃತಿ ಮಾಡಿಸುವ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರೊಂದಿಗೆ ರಾಜ್ಯ ಚುನಾವಣಾ ಆಯೋಗದ ಆಯುಕ್ತರು ನಡೆಸಿದ ಸಭೆಯ ನಡವಳಿಗಳ ದಿನಾಂಕ:22-11-2019.
2. ಅಧೀನ ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು ಇವರ ಪತ್ರ ಸಂಖ್ಯೆ:ರಾಚುಆ:03.ಈಜಿಪಿ.2020 ದಿನಾಂಕ: 03-01-2020.

**ಪ್ರಸ್ತಾವನೆ:**

2020ರ ಗ್ರಾಮ ಪಂಚಾಯಿತಿ ಸಾರ್ವತ್ರಿಕ ಚುನಾವಣೆಯ ಪೂರ್ವದಲ್ಲಿ ಮತದಾನ ಮಾಡುವ ಕುರಿತು ಮತ್ತು ಸೂಕ್ತ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ ರಾಜ್ಯಾದ್ಯಂತ ಮತದಾರರಲ್ಲಿ ಜಾಗೃತಿ ಮೂಡಿಸಲು ರಾಜ್ಯ ಚುನಾವಣಾ ಆಯೋಗವು ಉದ್ದೇಶಿಸಿರುತ್ತದೆ. ಇದಕ್ಕಾಗಿ ಆಯೋಗವು ಎನ್.ಜಿ.ಒ.ಗಳ ಸಹಕಾರವನ್ನು ಪಡೆಯಲಿಚ್ಛಿಸಿರುತ್ತಾರೆ. ಈ ಕುರಿತು ಈಗಾಗಲೇ ದಿನಾಂಕ:14-01-2020ರಂದು ಆಯೋಗದಲ್ಲಿ ಎನ್.ಜಿ.ಒ.ಗಳ ಸಭೆ ನಡೆಸಲಾಗಿರುತ್ತದೆ.

ಈ ನಿಟ್ಟಿನಲ್ಲಿ ರಾಜ್ಯ ಚುನಾವಣಾ ಆಯೋಗವು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಉದ್ದೇಶಿಸಿರುತ್ತದೆ. ಈ ಯೋಜನೆ ಅನುಷ್ಠಾನಕ್ಕಾಗಿ ಆಯೋಗವು ಕ್ರಿಯಾಯೋಜನೆಯನ್ನು ಸಿದ್ಧಪಡಿಸಿರುತ್ತಾರೆ. ಮೇಲೆ ಓದಲಾದ (1)ರ ನಡವಳಿಯನ್ವಯ ಗ್ರಾಮೀಣ ಪ್ರದೇಶಗಳಲ್ಲಿ ಮತದಾರರ ಜಾಗೃತಿ ಕಾರ್ಯಕ್ರಮಗಳನ್ನು (VAP) ಅನುಷ್ಠಾನಕ್ಕೆ ತರಲು ತೀರ್ಮಾನಿಸಲಾಗಿರುತ್ತದೆ.

ಈ ಕಾರಣಕ್ಕಾಗಿ, ರಾಜ್ಯ ಚುನಾವಣಾ ಆಯೋಗದಿಂದ ನೀಡಲಾಗಿರುವ ಬಜೆಟ್ ಪ್ರಸ್ತಾವನೆಯಲ್ಲಿ ರೂ.12.00ಕೋಟಿಗಳನ್ನು ಕೋರಲಾಗಿರುತ್ತದೆ. ಪ್ರಸ್ತುತ ರಾಜ್ಯ ಚುನಾವಣಾ ಆಯೋಗವು ಸಿದ್ಧಪಡಿಸಿರುವ ಕ್ರಿಯಾಯೋಜನೆಯ ಅನುಷ್ಠಾನಕ್ಕಾಗಿ ಅನುದಾನದ ಅಗತ್ಯತೆ ಇರುತ್ತದೆ. ಆದ್ದರಿಂದ, ಕೂಡಲೇ ಮುಂಗಡವಾಗಿ ರೂ.5.00 ಕೋಟಿಗಳ ಅನುದಾನವನ್ನು ಲೆಕ್ಕ ಶೀರ್ಷಿಕೆ:2515-00-101-0-11(059)ಗೆ ಬಿಡುಗಡೆ ಮಾಡುವಂತೆ ಮೇಲೆ ಓದಲಾದ (2)ರ ಪತ್ರದಲ್ಲಿ ಕೋರಿರುತ್ತಾರೆ. ಈ ಹಿನ್ನಲೆಯಲ್ಲಿ ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ(ಆರ್‌ಜಿಎಸ್ಎ) ಯೋಜನೆಯಡಿಯಲ್ಲಿ 2019-20ನೇ ಸಾಲಿಗೆ ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದ CECಯು

ಅನುಮೋದನೆ ನೀಡಿರುವ ಮಾಹಿತಿ, ಶಿಕ್ಷಣ ಮತ್ತು ಸಂವಹನ(IEC) ಘಟಕದಡಿಯಲ್ಲಿ ರೂ.1.33ಕೋಟಿಗಳ ಅನುದಾನವನ್ನು ಆರಂಭದಲ್ಲಿ ಬಳಸಿಕೊಂಡು ಗ್ರಾಮ ಪಂಚಾಯಿತಿ ಚುನಾವಣೆಯ ಜಾಗೃತಿ ಕಾರ್ಯಕ್ರಮಗಳನ್ನು ಕೈಗೊಳ್ಳಲು ರಾಜ್ಯ ಚುನಾವಣಾ ಆಯೋಗಕ್ಕೆ ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ.

ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 101 ಜಿಪಸ 2020, ದಿನಾಂಕ:16-03-2020**

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, 2020ರ ಗ್ರಾಮ ಪಂಚಾಯಿತಿ ಸಾರ್ವತ್ರಿಕ ಚುನಾವಣೆಯ ಪೂರ್ವದಲ್ಲಿ ಮತದಾನ ಮಾಡುವ ಕುರಿತು ಮತ್ತು ಸೂಕ್ತ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ ರಾಜ್ಯಾದ್ಯಂತ ಮತದಾರರಲ್ಲಿ ಜಾಗೃತಿ ಮೂಡಿಸಲು ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ (ಆರ್‌ಜಿಎಸ್‌ಎ) ಯೋಜನೆಯಡಿಯಲ್ಲಿ 2019-20ನೇ ಸಾಲಿಗೆ ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದ CECಯು ಅನುಮೋದನೆ ನೀಡಿರುವ ಮಾಹಿತಿ, ಶಿಕ್ಷಣ ಮತ್ತು ಸಂವಹನ (IEC) ಘಟಕದಡಿಯಲ್ಲಿ ರೂ.1.33ಕೋಟಿಗಳ ಅನುದಾನವನ್ನು ಆರಂಭದಲ್ಲಿ ಬಳಸಿಕೊಂಡು ಗ್ರಾಮ ಪಂಚಾಯಿತಿ ಚುನಾವಣೆಯ ಜಾಗೃತಿ ಕಾರ್ಯಕ್ರಮಗಳನ್ನು ಕೈಗೊಳ್ಳಲು ರಾಜ್ಯ ಚುನಾವಣಾ ಆಯೋಗಕ್ಕೆ ಬಿಡುಗಡೆ ಮಾಡಲು ಆದೇಶಿಸಲಾಗಿದೆ.

**ಅನುದಾನವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ವಿನಿಯೋಗಿಸಬೇಕಾಗಿರುತ್ತದೆ.**

1. ಗ್ರಾಮ ಪಂಚಾಯಿತಿ ಚುನಾವಣೆಗಳಲ್ಲಿ ಹೆಚ್ಚಿನ ಶೇಕಡಾವಾರು ಮತದಾನವಾಗುತ್ತಿರುವುದರಿಂದ, ಮತದಾರರನ್ನು ಮತದಾನ ಮಾಡಲು ಜಾಗೃತಿ ಮೂಡಿಸುವುದಕ್ಕಿಂತ ಹೆಚ್ಚಾಗಿ ನೈತಿಕ ಮತದಾನಕ್ಕೆ ಒತ್ತನ್ನು ನೀಡಲು ಅನುದಾನವನ್ನು ಬಳಸುವುದು.
2. ಸಾಮಾನ್ಯ ಜನರಿಗೆ ಗ್ರಾಮ ಪಂಚಾಯತಿಗಳಿಗೆ ಬರುತ್ತಿರುವ ಅನುದಾನಗಳ ವಿವರಗಳು ಮತ್ತು ಗ್ರಾಮ ಪಂಚಾಯಿತಿಗಳು ನೀಡುತ್ತಿರುವ ಸೇವೆಗಳ ಪರಿಚಯವನ್ನು ಮಾಡಿಸುವುದು.
3. ಗ್ರಾಮ ಪಂಚಾಯಿತಿ ಚುನಾವಣೆಗಳಲ್ಲಿ ಸ್ಪರ್ಧಿಸಲು ಇರುವಂತಹ ಅರ್ಹತೆಗಳು, ಅದರಲ್ಲೂ ಹೆಚ್ಚಾಗಿ ಸುಶಿಕ್ಷಿತ ಜನರು ಅಭ್ಯರ್ಥಿಗಳಾಗಿ ಪಾಲ್ಗೊಳ್ಳಲು ಪ್ರೋತ್ಸಾಹಿಸುವುದು.
4. ಗ್ರಾಮ ಪಂಚಾಯಿತಿಯಲ್ಲಿ ಅನುಸರಿಸುತ್ತಿರುವ ಮೀಸಲಾತಿಯ ಬಗ್ಗೆಯೂ ಕೂಡ ಜನರಿಗೆ ಮಾಹಿತಿ ನೀಡುವುದು. ಮೇಲಿನ ಎಲ್ಲಾ ಅಂಶಗಳಿಗೆ ಒತ್ತನ್ನು ನೀಡುವುದರೊಂದಿಗೆ ಸಮೂಹ ಮಾಧ್ಯಮಗಳಾದ ರೇಡಿಯೋ, ದೂರದರ್ಶನ ಮತ್ತು ಗ್ರಾಮ ಪಂಚಾಯಿತಿಗಳಲ್ಲಿ ಧ್ವನಿವರ್ಧಕದ ಮುಖಾಂತರ ಮಾಹಿತಿಯನ್ನು ಭಿತ್ತರಿಸಲು ಅನುದಾನವನ್ನು ಬಳಸುವುದು.

-

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 1 ಟಿಎಫ್‌ಪಿ 2019, ದಿನಾಂಕ:03-04-2019ರಲ್ಲಿ ಆಯಾಯಾ ಇಲಾಖಾ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
16/03/2020
(ಸಿ.ಮಂಜೂಳ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

16-03-2020

ಇವರಿಗೆ:

1. ಮಹಾಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು
2. ಪ್ರಧಾನ ಮಹಾಲೇಖಪಾಲರು (ಜಿ&ಎಸ್.ಎಸ್.ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ&ಆರ್‌ಎಸ್‌ಎ), ಕರ್ನಾಟಕ, ಬೆಂಗಳೂರು.
4. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ, ನಂ-8, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು-52.
5. ಉಪಕಾರ್ಯದರ್ಶಿ, ಟಿ.ಎನ್.ಎಂ.ಸಿ, ಖನಿಜ ಭವನ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
7. ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು/ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
8. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

**<u>ಪ್ರತಿಯನ್ನು ಮಾಹಿತಿಗಾಗಿ:</u>**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಿರಿಯ ಸಹಾಯಕರು.